**ಶ್ರೀ ಸಿ.ಟಿ.ರವಿ, ಮಾನ್ಯ ವಿಧಾನ ಪರಿಷತ್ ಸದಸ್ಯರು, ಇವರು ದಿನಾಂಕ:16-12-2023 ರಂದು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಸಮಾಜ ಕಲ್ಯಾಣ ಇಲಾಖೆಯ ಮಾಹಿತಿ:-**

**ಸೂಚನೆ:**

ಹಲವು ವರ್ಷಗಳ ಹೋರಾಟಕ್ಕೆ ಮಣಿದ ಸರ್ಕಾರ 2004 ರಲ್ಲಿ ಮಾದಿಗ ಸಮುದಾಯಕ್ಕೆ ಮತ್ತು ಉಪ ಜಾತಿಗಳಿಗೆ ಒಳ ಮೀಸಲಾತಿ ಕಲ್ಪಿಸುವ ಸಂಬಂಧ ನ್ಯಾ. ಸದಾಶಿವ ಆಯೋಗವನ್ನು ರಚಿಸಿತು. ಹಲವು ವರ್ಷಗಳ ನಂತರ ನ್ಯಾ. ಎ.ಜೆ. ಸದಾಶಿವ ರವರು ತಮ್ಮ ವರದಿಯನ್ನು ಸರ್ಕಾರಕ್ಕೆ ಹಸ್ತಾಂತರಿಸಿದರು. ವರದಿ ಹಸ್ತಾಂತರದ ನಂತರ ವರದಿಯನ್ನು ಜಾರಿಗೊಳಿಸುವಂತೆ ಆಗ್ರಹಿಸಿ ಹಲವು ವರ್ಷಗಳಿಂದ ಅನೇಕ ಚಳುವಳಿಗಳ ಮೂಲಕ ಸರ್ಕಾರಕ್ಕೆ ಒತ್ತಾಯಿಸಿದ್ದರೂ ಸರ್ಕಾರ ಜಾರಿಗೆ ಕ್ರಮ ಕೈಗೊಂಡಿಲ್ಲ. ಒಳ ಮೀಸಲಾತಿ ಕುರಿತು ಸುಪ್ರೀಂ ಕೋರ್ಟ್ ಈಗಾಗಲೆ ತೀರ್ಪು ನೀಡಿದೆ. ತೀರ್ಪು ನೀಡಿದ ಕೆಲವೇ ದಿನಗಳಲ್ಲಿ ಹರ್ಯಾಣ ಸರ್ಕಾರ ಒಳ ಮೀಸಲಾತಿ ಯನ್ನು ಜಾರಿಗೆ ತಂದಿದ್ದರೂ, ರಾಜ್ಯ ಸರ್ಕಾರ ಮಾತ್ರ ಮೀಸಲಾತಿ ಜಾರಿಗೆ ಕ್ರಮ ಕೈಗೊಳ್ಳದೆ ಕಾಲಹರಣ ಮಾಡುತ್ತಿದೆ. ಮೀಸಲಾತಿ ಜಾರಿಯಲ್ಲಿ ಸರ್ಕಾರದ ವಿಳಂಬ ಧೋರಣೆಯನ್ನು ಖಂಡಿಸಿ, ಮೀಸಲಾತಿ ಜಾರಿಗೆ ಒತ್ತಾಯಿಸಿ ಇಂದು ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಯವರ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿದೆ. ಈ ಸರ್ಕಾರ ಅಧಿಕಾರಕ್ಕೆ ಬಂದು ಒಂದೂವರೆ ವರ್ಷಗಳು ಕಳೆದಿದ್ದರೂ ನೀಡಿದ್ದ ಆಶ್ವಾಸನೆಯಂತೆ ವರದಿ ಜಾರಿಗೆ ಕ್ರಮ ಕೈಗೊಳ್ಳದಿರುವ ಸರ್ಕಾರದ ಧೋರಣೆ ಸಮಾಜವನ್ನು ಕೆರಳಿಸಿದೆ. ಹೋರಾಟ ವಿಕೋಪಕ್ಕೆ ತಿರುಗುವ ಮುನ್ನ ಸರ್ಕಾರ ನ್ಯಾ.ಸದಾಶಿವ ಆಯೋಗದ ವರದಿಯನ್ನು ಅಂಗೀಕರಿಸಿ. ಒಳ ಮೀಸಲು ಜಾರಿಗೆ ತರಲು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸುತ್ತೇನೆ.

**ಉತ್ತರ:**

ದಿನಾಂಕ:24-03-2023 ರಂದು ಜರುಗಿದ ಸಚಿವ ಸಂಪುಟದ ನಿರ್ಣಯದಂತೆ, ಹಿಂದಿನ ಸರ್ಕಾರವು ಪರಿಶಿಷ್ಟ ಜಾತಿಗಳ ಉಪ ಜಾತಿಗಳಿಗೆ ಒಳಮೀಸಲಾತಿ ಕಲ್ಪಿಸುವ ಬಗ್ಗೆ ಕೇಂದ್ರ ಸರ್ಕಾರಕ್ಕೆ ದಿನಾಂಕ:27.03.2023 ರಂದು ಶಿಫಾರಸ್ಸು ಮಾಡಿರುತ್ತದೆ. ಮುಂದುವರೆದು, ಪರಿಶಿಷ್ಟ ಜಾತಿಗಳಲ್ಲಿ ಆಂತರಿಕ ಮೀಸಲಾತಿಯನ್ನು ಅಧ್ಯಯನ ಮಾಡಲು ನೇಮಿಸಲಾಗಿದ್ದ ಸದಾಶಿವ ಆಯೋಗವು ನೀಡಿರುವ ಶಿಫಾರಸ್ಸುಗಳು ಅಪ್ರಸ್ತುತ. ಆದ್ದರಿಂದ ಸದರಿ ಆಯೋಗದ ವರದಿಯನ್ನು ಮುಕ್ತಾಯಗೊಳಿಸಲಾಗಿದೆ ಎಂದು ಸಚಿವ ಸಂಪುಟ ಸಭೆಯಲ್ಲಿ ನಿರ್ಣಯಿಸಲಾಗಿದೆ. ಆದ್ದರಿಂದ ಸದರಿ ಆಯೋಗದ ಶಿಫಾರಸ್ಸುಗಳನ್ನು ಜಾರಿಗೆ ತರುವ ಪ್ರಶ್ನೆ ಉದ್ಭವಿಸುವುದಿಲ್ಲ.

ಮಾನ್ಯ ಸರ್ವೋಚ್ಚ ನ್ಯಾಯಾಲಯವು Civil Appeal No. 2317 of 2011 The State of Punjab & Ors. Versus Davinder Singh &Ors. (With other cases) ದಿನಾಂಕ:01-08-2024 ರಂದು 6:1ರ ಅನುಪಾತದಲ್ಲಿ ಬಹುಮತದ ನಿರ್ಧಾರದೊಂದಿಗೆ ಈ ಕೆಳಗಿನಂತೆ ಆದೇಶಿಸಿದೆ.

> **"The State Government can sub classify the Scheduled Castes and the State must collect the data on the**

inadequacy of representation in the services of the state because it is used as an indicator of backwardness."

ಪರಿಶಿಷ್ಟ ಜಾತಿಗಳ ಒಳಮೀಸಲಾತಿಯ ಕುರಿತಂತೆ, ದಿನಾಂಕ:28-10-2024 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಆಯೋಗದ ತನಿಖಾ ಕಾಯಿದೆ 1952 ರ ಅಡಿಯಲ್ಲಿ ಪರಿಶಿಷ್ಟ ಜಾತಿಗಳಲ್ಲಿ ಒಳಮೀಸಲಾತಿ ವಿಷಯದ ಬಗ್ಗೆ ಸೂಕ್ತ ಶಿಫಾರಸಿನೊಂದಿಗೆ ವರದಿಯನ್ನು ಸಲ್ಲಿಸಲು ಆದೇಶ ಸಂಖ್ಯೆ:SWD/8/SLP/2024(P-1), ದಿನಾಂಕ:12-11-2024 ರಂದು ಕರ್ನಾಟಕ ಗೌರವಾನ್ವಿತ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಶ್ರೀ ಹೆಚ್.ಎನ್.ನಾಗಮೋಹನ್ ದಾಸ್ ಇವರ ಅಧ್ಯಕ್ಷತೆಯಲ್ಲಿ ಏಕ ಸದಸ್ಯ ಆಯೋಗವನ್ನು ರಚಿಸಿ ಆದೇಶಿಸಲಾಗಿದೆ. ಸದರಿ ಆಯೋಗಕ್ಕೆ ಅರವತ್ತು ದಿನಗಳ ಕಾಲಾವಕಾಶ ನೀಡಿದ್ದು, ವರದಿ ಬಂದ ನಂತರ ಪರಿಶೀಲಿಸಿ, ಮುಂದಿನ ಕ್ರಮವಹಿಸಲಾಗುವುದು.

**ಸಂಖ್ಯೆ: SWD/573/SLP/2024**

(ಡಾ.ಹೆಚ್.ಸಿ.ಮಹಾದೇವಪ್ಪ)
ಸಮಾಜ ಕಲ್ಯಾಣ ಸಚಿವರು